**ಮಾನ್ಯ ವಿಧಾನ ಪರಿಷತ್ತು ಸದಸ್ಯರಾದ ಡಾ: ಕೆ. ಗೋವಿಂದ ರಾಜ್ ರವರು ನಿಯಮ 330ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಸರ್ಕಾರದ ಉತ್ತರ**

**ವಿಷಯ:**

ಬೆಂಗಳೂರು ಸುತ್ತಮುತ್ತಲಿನ ಬ್ಯಾಟರಾಯನಪುರ, ಯಲಹಂಕ, ಕೆ.ಆರ್.ಪುರಂ, ರಾಜರಾಜೇಶ್ವರಿ ನಗರ, ಬೊಮ್ಮನಹಳ್ಳಿ, ದಾಸರಹಳ್ಳಿ, ಮಹದೇವಪುರ ಎಂಬ ಏಳು ನಗರ ಸಭೆಗಳು ಮತ್ತು ಕೆಂಗೇರಿ ಪುರಸಭೆಯನ್ನು ಸೇರಿಸಿ ಅವುಗಳ ವ್ಯಾಪ್ತಿಯಲ್ಲಿದ್ದ ಸರಿಸುಮಾರು 110 ಹಳ್ಳಿಗಳನ್ನು ಒಟ್ಟು ಸೇರಿಸಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯನ್ನಾಗಿ ಹೆಸರಿಸಲಾಗಿತ್ತು. ಈ 110 ಹಳ್ಳಿಗಳ ಸರ್ವತೋಮುಖ ಬೆಳವಣಿಗೆಗೆ, ಅಭಿವೃದ್ಧಿ ಕಾರ್ಯಗಳಿಗೆ ಅನುವಾಗುವಂತೆ ಬಿ.ಬಿ.ಎಂ.ಪಿ. ಮತ್ತು ರಾಜ್ಯ ಸರ್ಕಾರ ಅಂದಿನಿಂದ ಇಂದಿನವರೆಗೂ 22,529 ಸಾವಿರ ಕೋಟಿಗೂ ಹೆಚ್ಚು ರೂಪಾಯಿಗಳನ್ನು ಬಿಡುಗಡೆ ಮಾಡಿದೆ. ಹತ್ತು ಹಲವು ಕಂಪನಿ, ವ್ಯಕ್ತಿಗಳಿಗೆ ಅಭಿವೃದ್ಧಿ ಕಾಮಗಾರಿಗಳೂ ಸೇರಿದಂತೆ ಹಲವು ಗುತ್ತಿಗೆಗಳನ್ನು ನೀಡಲಾಗಿದೆ. ಆದರೂ ಸಹ ಅಭಿವೃದ್ಧಿ ನಿರೀಕ್ಷೆಗೆ ತಕ್ಕಂತೆ ಆಗಿರುವುದಿಲ್ಲ. ಸಮಸ್ಯೆಗಳು ಪರಿಹಾರವಾಗುವುದರ ಬದಲು ದಿನೇ ದಿನೇ ಬೆಳೆಯುತ್ತಲೇ ಇದೆ. ಸಾವಿರಾರು ಕೋಟಿ ರೂಪಾಯಿಗಳ ಶ್ರೀ ಸಾಮಾನ್ಯನ ತೆರಿಗೆ ಹಣ, ಕನಸುಗಳು, ನಿರೀಕ್ಷೆಗಳು ಪರಿಣಾಮಕಾರಿಯಾಗಿ ಈಡೇರದಿರುವ ಮತ್ತು ಇವುಗಳನ್ನು ಸಮರ್ಥವಾಗಿ ಎದುರಿಸಲೇಬೇಕಾದ ಇಂದಿನ ಅನಿವಾರ್ಯ ಪರಿಸ್ಥಿತಿಯ ಕುರಿತು.

**ಉತ್ತರ:**

ಬೆಂಗಳೂರಿನ ಸುತ್ತಮುತ್ತಲಿನ 110 ಹಳ್ಳಿಗಳನ್ನು ಸೇರಿಸಿಕೊಂಡು 2007 ರಲ್ಲಿ ಹಿಂದಿನ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯನ್ನು ರಚಿಸಲಾಗಿತ್ತು. ಪ್ರಸ್ತುತ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯ ಪ್ರದೇಶವನ್ನು ಗ್ರೇಟರ್ ಬೆಂಗಳೂರು ಪ್ರಾಧಿಕಾರ ಪ್ರದೇಶವೆಂದು ಗೊತ್ತುಪಡಿಸಿ, ದಿನಾಂಕ: 02.09.2025 ರಂದು ಐದು ನಗರ ಪಾಲಿಕೆಗಳನ್ನು ಸೃಜಿಸಲಾಗಿರುತ್ತದೆ.

ಸದರಿ 110 ಹಳ್ಳಿಗಳ ಸರ್ವತೋಮುಖ ಬೆಳವಣಿಗೆಗೆ, ಅಭಿವೃದ್ಧಿ ಕಾರ್ಯಗಳಿಗೆ ಅನುವಾಗುವಂತೆ ಸರ್ಕಾರ ಮತ್ತು ಬಿ.ಬಿ.ಎಂ.ಪಿ.ಯಿಂದ ಹಂಚಿಕೆಯಾದ ಅನುದಾನಕ್ಕನುಗುಣವಾಗಿ ಸಾರ್ವಜನಿಕರಿಗೆ ಮೂಲಭೂತ ಸೌಕರ್ಯ ಒದಗಿಸುವ ನಿಟ್ಟಿನಲ್ಲಿ ರಸ್ತೆ ಅಭಿವೃದ್ಧಿ, ರಸ್ತೆ ಅಗಲೀಕರಣ ಕಾಮಗಾರಿ, ಡಾಂಬರೀಕರಣ ಕಾಮಗಾರಿ, ಬೃಹತ್ ನೀರುಗಾಲುವೆ, ಕೆರೆಗಳು, ಉದ್ಯಾನವನ, ಆಟದ ಮೈದಾನಗಳು, ಸಾರ್ವಜನಿಕ ಕಟ್ಟಡಗಳು (ಆಸ್ಪತ್ರೆ, ಶಾಲೆ / ಕಾಲೇಜು, ಕಛೇರಿ ಕಟ್ಟಡಗಳು), ವಾರ್ಡ್ ರಸ್ತೆಗಳ ನಿರ್ಮಾಣ / ಅಭಿವೃದ್ಧಿ, ಕುಡಿಯುವ ನೀರಿನ ಕಾಮಗಾರಿ, ಬೋರ್ ವೆಲ್ ಅಳವಡಿಕೆ, ಶುದ್ಧ ಕುಡಿಯುವ ನೀರಿನ ಘಟಕ, ಬೀದಿ ದೀಪ ನಿರ್ವಹಣೆ, ಶೌಚಾಲಯ ನಿರ್ಮಾಣ, ಸಂಸ್ಕರಣಾ ಘಟಕಗಳ ನಿರ್ಮಾಣ, ಟ್ರಾನ್ಸ್ಫರ್ ಸ್ಟೇಷನ್ ಗಳ ನಿರ್ಮಾಣ, ಒಣತ್ಯಾಜ್ಯ ಸಂಗ್ರಹಣಾ ಘಟಕ ನಿರ್ಮಾಣ, ಪೌರಕಾರ್ಮಿಕರಿಗೆ ಸುವಿಧ ಕ್ಯಾಬಿನ್‌ಗಳ ನಿರ್ಮಾಣ ಕಾಮಗಾರಿಗಳನ್ನು ಕೈಗೊಳ್ಳಲಾಗಿರುತ್ತದೆ. ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಇಲಾಖೆಗೆ ಹಸ್ತಾಂತರವಾಗುವವರೆಗೂ ಕುಡಿಯುವ ನೀರಿನ ವ್ಯವಸ್ಥೆ ಮತ್ತು ಒಳಚರಂಡಿ ವ್ಯವಸ್ಥೆಗಳನ್ನು ಕಲ್ಪಿಸಲಾಗಿರುತ್ತದೆ.

. . .2.

ಬೆಂಗಳೂರು ವಿಶ್ವದಲ್ಲೇ ಅತೀ ವೇಗವಾಗಿ ಬೆಳೆಯುತ್ತಿರುವ ಎರಡನೇ ನಗರವಾಗಿದ್ದು, ಅದರಂತೆ ಬೆಂಗಳೂರು ನಗರದಲ್ಲಿ ಜನಸಾಂದ್ರತೆ, ವಾಹನಗಳ ಸಂಚಾರ ದಟ್ಟಣೆ ದಿನಂಪ್ರತಿ ಹೆಚ್ಚಾಗುತ್ತಿದ್ದು, ಬೆಳೆಯುತ್ತಿರುವ ವೇಗಕ್ಕೆ ಅನುಗುಣವಾಗಿ ಸ್ಥಳೀಯ ಸಾರ್ವಜನಿಕರ ಕುಂದು-ಕೊರತೆಗಳನ್ನು ಸ್ಥಳೀಯವಾಗಿ ಪರಿಹರಿಸಿ, ಮೂಲಸೌಕರ್ಯ ಅಭಿವೃದ್ಧಿ ಕಾಮಗಾರಿಗಳಿಗೆ ಸ್ಥಳೀಯ ಮಟ್ಟದಲ್ಲಿ ಆದ್ಯತೆ ನೀಡಿ, ಗಮನ ಕೇಂದ್ರೀಕರಿಸಿ ಹೆಚ್ಚು ದಕ್ಷ, ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಅನುವಾಗುವಂತೆ ಪ್ರಸ್ತುತ 05 ನಗರ ಪಾಲಿಕೆಗಳನ್ನು ಸೃಜಿಸಿ ವಿಕೇಂದ್ರೀಕೃತ ಮಾದರಿಯಲ್ಲಿ ಸಮಸ್ಯೆಗಳಿಗೆ ಪರಿಹಾರ ಒದಗಿಸಲು ಕ್ರಮವಹಿಸಲಾಗುತ್ತಿದೆ.

ಅಲ್ಲದೇ, ಬೃಹತ್ ನಿರ್ಮಾಣ ಕಾಮಗಾರಿಗಳನ್ನು ಕೈಗೊಳ್ಳಲು ಬಿ-ಸ್ಮೈಲ್ ಎಂಬ ಸ್ವತಂತ್ರ ಸಂಸ್ಥೆಯನ್ನು ರಚಿಸಿ, ಗ್ರೇಟರ್ ಬೆಂಗಳೂರು ಪ್ರದೇಶ ವ್ಯಾಪ್ತಿಯಲ್ಲಿ ವೈಟ್ ಟಾಪಿಂಗ್, ಸುರಂಗ ಮಾರ್ಗ, ಮೇಲ್ಸೇತುವೆ ಮತ್ತು ಬೃಹತ್ ನೀರುಗಾಲುವೆಗಳ ನಿರ್ಮಾಣ ಕಾಮಗಾರಿಗಳನ್ನು ತ್ವರಿತಗತಿಯಲ್ಲಿ ಕೈಗೊಳ್ಳಲು ಯೋಜಿಸಲಾಗಿದೆ.

**ನಅಇ 263 ಎಂಎನ್‌ವೈ 2026**

(ಡಿ.ಕೆ.ಶಿವಕುಮಾರ್)
ಉಪ ಮುಖ್ಯಮಂತ್ರಿ